# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಹಂಚಿಕೆಯಾಗಿರುವ 6.00 ಮೆಗಾ ವ್ಯಾಟ್ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 25.20 ಮೆಗಾ ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 210 ಎನ್‌ಸಿಇ 2005 ದಿನಾಂಕ: 20.8.2005.

2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 463 ಎನ್‌ಸಿಇ 2006 ದಿನಾಂಕ: 22.12.2006.

3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: KRED/08/VWTIPL-(6 MW to 34.20 MW)/Pamankallur-1/2011/2899 ದಿನಾಂಕ: 19/21.9.2011 ಮತ್ತು KRED/08/VWTIPL/2011/4381 ದಿನಾಂಕ: 11/23.11.2011 ಹಾಗೂ KRED/08/SRR/VWILLP-(6 MW to 34.20 MW)/2012/1897 ದಿನಾಂಕ: 05.07.2012.

4) ದಿನಾಂಕ 07.07.2012 ರಂದು ನಡೆದ ಹಂಚಿಕೆ ಸಮಿತಿ ನಡವಳಿ.

* * *

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ:: ಎನ್.ಇ.ಜಿ. ಮೈಕಾನ್ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬಾಗಲಕೋಟೆ, ರಾಯಚೂರು, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ 99.75 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕೆಲವೊಂದು ನಿಬಂಧನೆಗೊಳಪಟ್ಟು ಹಂಚಿಕೆ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ:: ಎನ್.ಇ.ಜಿ. ಮೈಕಾನ್ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಕಂಪನಿಯ ಹೆಸರನ್ನು ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಎಂದು ಬದಲಾಯಿಸಿ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಕಂಪನಿಯವರಿಗೆ ಮಂಜೂರಾಗಿರುವ 99.75 ಮೆ.ವ್ಯಾ. ಸಾಮರ್ಥ್ಯದಿಂದ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಬಸಾಪುರ, ಗ್ರಾಮದಲ್ಲಿ ಮಂಜೂರಾಗಿರುವ ಅಂಶಿಕ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 34.20 ಮೆಗಾ ವ್ಯಾಟ್‌ಗೆ ಹೆಚ್ಚಿಸುವಂತೆ, ಮತ್ತು ಸದರಿ ಯೋಜನೆಯನ್ನು ಅರಣ್ಯ, ಕಂದಾಯ ಮತ್ತು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸಲಾಗುವುದೆಂದು ತಿಳಿಸಿ ದಿನಾಂಕ 19/21.9.2011ರ ಪತ್ರದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಅನಂತರ ದಿನಾಂಕ 05.07.2012ರ ಪತ್ರದಲ್ಲಿ ಯೋಜನೆಯು ಬರುವ ಒಟ್ಟಾರೆ ಜಮೀನಿನಲ್ಲಿ 34.46 ಎಕರೆ ಅರಣ್ಯ ಭೂಮಿಯಲ್ಲಿ 5 locations ಕಂದಾಯ ಇಲಾಖೆಯ 49.15 ಎಕರೆ ಜಮೀನಿನಲ್ಲಿ 9 locations ಹಾಗೂ 19.3 ಎಕರೆ ಖಾಸಗಿ ಜಮೀನಿನಲ್ಲಿ 5 locations ಗಳನ್ನು ಹೊಂದಿದ್ದು, ಅರಣ್ಯ ಇಲಾಖೆಯ ಜಮೀನಿನಲ್ಲಿ ಬರುವ ಯೋಜನೆಯನ್ನು ಹೊರತುಪಡಿಸಿ ಖಾಸಗಿ ಮತ್ತು ಸರ್ಕಾರಿ ಜಮೀನಿನಲ್ಲಿ ಬರುವ ಸಾಮರ್ಥ್ಯ ಹೆಚ್ಚಳವನ್ನು ಪರಿಗಣಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ದಿನಾಂಕ :07.07.2012ರಂದು ನಡೆದ ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ : ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರು ಕಂದಾಯ ಮತ್ತು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸಲಿರುವ ಯೋಜನೆಗಳ ಸಾಮರ್ಥ್ಯವನ್ನು 25.20 ಮೆ.ವ್ಯಾ.ಗೆ ಹೆಚ್ಚಿಸಲು ಸಮಿತಿಯು ಶಿಫಾರಸ್ಸಿಸಿದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ:-

ಸರ್ಕಾರಿ ಆದೇಶ ಸಂಖ್ಯೆ: ಇಎನ್ 388 ಎನ್‌ಸಿಇ 2011,
ಬೆಂಗಳೂರು, ದಿನಾಂಕ: 26.07.2012.

ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರಿಗೆ ರಾಯಚೂರು ಜಿಲ್ಲೆಯ ಬಸಾಪುರ ಗ್ರಾಮದಲ್ಲಿ ಹಂಚಿಕೆಯಾಗಿರುವ 6.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು ಅರಣ್ಯ ಇಲಾಖೆಯ 34.46 ಎಕರೆ ಜಮೀನಿನಲ್ಲಿ ಬರುವ 9.00 ಮೆ.ವ್ಯಾ. ಸಾಮರ್ಥ್ಯವನ್ನು ಹೊರತು ಪಡಿಸಿ ಕಂದಾಯ ಜಮೀನು 49.15 ಎಕರೆಯಲ್ಲಿ 9 ಲೋಕೆಷನ್‌ಗಳಿಂದ 16.2 ಮೆ.ವ್ಯಾ. ಮತ್ತು ಖಾಸಗಿ ಜಮೀನಿನಲ್ಲಿ 19.3 ಎಕರೆಯಲ್ಲಿ 5 ಲೊಕೇಷನ್‌ಗಳಿಂದ 9.00 ಮೆ.ವ್ಯಾ. ಅನುಷ್ಠಾನಗೊಳಿಸಲಿರುವ ಯೋಜನೆಗಳ ಒಟ್ಟು ಸಾಮರ್ಥ್ಯವನ್ನು **25.20 ಮೆಗಾ ವ್ಯಾಟ್** ಸಾಮರ್ಥ್ಯಕ್ಕೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಮತ್ತು ಕೆಳಕಂಡ ಷರತ್ತಿಗೊಳಪಟ್ಟು **ಹೆಚ್ಚಿಸಿ ಆದೇಶಿಸಿದೆ.**

Wind Section
Inward No. 11935
Date: 4-8-2012
Sig.

............2)

| Sl N | WTG No. | District | Taluk | Village | Survey No. | Extent (Acres) |
|---|---|---|---|---|---|---|
| | | | **REVENUE LAND** | | | |
| 1 | | Raichur | Manvi | Pamenkallur | 151 | 0.34 |
| 2 | | Raichur | Lingsugur | Chikkahesugur | 35 | 6.12 |
| 3 | P11 | Raichur | Lingsugur | Chikkahesugur | 41 | 10.27 |
| 4 | P5, P19 | Raichur | Lingsugur | Basapur | 77 | 7.76 |
| 5 | P6, P8, P12 | Raichur | Lingsugur | Huvinabhavi | 32 | 10.88 |
| 6 | P2, P3, P16 | Raichur | Lingsugur | Huvinabhavi | 44/1 | 13.78 |
| | **TOTAL** | | | | | **49.15** |
| | | | **PRIVATE LAND** | | | |
| 1 | | Raichur | Manvi | Pamenkallur | 168 | 0.65 |
| 2 | | Raichur | Lingsugur | Chikkahesugur | 36 | 0.79 |
| 3 | | Raichur | Lingsugur | Chikkahesugur | 37 | 0.31 |
| 4 | P13 | Raichur | Lingsugur | Chikkahesugur | 40 | 3.14 |
| 5 | P10 | Raichur | Lingsugur | Chikkahesugur | 45 | 3.50 |
| 6 | P17 | Raichur | Lingsugur | Basapur | 73 | 2.72 |
| 7 | | Raichur | Lingsugur | Basapur | 72 | 0.49 |
| 8 | P15 | Raichur | Lingsugur | Basapur | 59 | 3.32 |
| 9 | | Raichur | Lingsugur | Huvinabhavi | 44/8 | 0.29 |
| 10 | | Raichur | Lingsugur | Huvinabhavi | 44/7 | 0.01 |
| 11 | P14 | Raichur | Lingsugur | Huvinabhavi | 44/5 | 3.45 |
| 12 | | Raichur | Lingsugur | Huvinabhavi | 44/4 | 0.55 |
| 13 | | Raichur | Lingsugur | Bhuddini | 9 | 0.03 |
| 14 | | Raichur | Lingsugur | Bhuddini | 8(2) | 0.05 |
| | **TOTAL** | | | | | **19.30** |

1 ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್, ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಮೆ :: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರು ವಿದ್ಯುತ್ ಖರೀದಿ ಒಪ್ಪಂದವನ್ನು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಗುಲ್ಬರ್ಗ ಇವರೊಂದಿಗೆ ಮಾಡಿಕೊಳ್ಳತಕ್ಕದ್ದು.

3 ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

26/1/12
(ಕೌಸಲ್ಯಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

............3)

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಯಚೂರು ಜಿಲ್ಲೆ, ರಾಯಚೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಾರ್ಪೊರೇಟ್ ಕಛೇರಿ, ಸ್ಟೇಷನ್ ರಸ್ತೆ, ಪರಿವಾರ್ ಹೋಟೆಲ್ ಎದುರುಗಡೆ, ಗುಲ್ಬರ್ಗಾ-585 102.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
10. ಮೆ॥ ವೆಸ್ಟಾಸ್ ವಿಂಡ್ ಟೆಕ್ನಾಲಜಿಇಂಡಿಯಾ ಪ್ರೈವೇಟ್ ಲಿಮಿಟೆಡ್, ನಂ 33, 'ಸ್ವಯಂಪ್ರಭೆ' ಅಮೇರಿಕನ್ ಕಾಲೋನಿ, ನಾರ್ತ್ ಪಾರ್ಕ್ ರಸ್ತೆ, ಕುಮಾರ ಪಾರ್ಕ್ ಪೂರ್ವ, ಬೆಂಗಳೂರು - 560 001.
11. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.